ನೀಡಿದೆ. ವಿಶೇಷ ಪ್ರಕರಣಗಳಲ್ಲಿ ಜೇಷ್ಠತೆಯನ್ನು ಹೊರತುಪಡಿಸಿ ಪ್ರೋತ್ಸಾಹಕ ಧನ ಪಾವತಿ ಮಾಡುವ ಅಧಿಕಾರವನ್ನು ನಿರ್ದೇಶಕರಿಗೆ ನೀಡಿದೆ.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2047–00–103–0–02–306 ನಗದು ಮತ್ತು ಪ್ರೋತ್ಸಾಹಕ ಬಹುಮಾನ" ಇದರಲ್ಲಿ ಭರಿಸತಕ್ಕದ್ದು.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿ

4411 (3944) : ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸರ್ವಾಂಗೀಣ ಅಭಿವೃದ್ಧಿಗಾಗಿ ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಒಳಪಡಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಆ) ಅಭಿವೃದ್ಧಿ ಕಾರಣ ಈ ಮಹಾನಗರ ಪಾಲಿಕೆಯು ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಸೇರ್ಪಡೆ ಮಾಡಲು ಯಾವುದಾದರೂ ಕಾನೂನಿನ ನಿರ್ಬಂಧನೆಗಳು ಅಡ್ಡಿ ಬರುತ್ತವೆಯೇ; ಇದ್ದಲ್ಲಿ, ಕಾರಣಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು)

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸರ್ವಾಂಗೀಣ ಅಭಿವೃದ್ಧಿಗಾಗಿ ವಿಶ್ವಬ್ಯಾಂಕಿನ ಯೋಜನೆಯಡಿಯಲ್ಲಿ ಒಳಪಡಿಸುವ ವಿಚಾರವಿದೆ.

ಆ) ಯಾವುದೆ ಕಾನೂನಿನ ನಿರ್ಬಂಧ ಇರುವುದಿಲ್ಲ.

ಹುಬ್ಬಳ್ಳಿ–ಧಾರವಾಡ ನಗರ ಮಧ್ಯದಲ್ಲಿರುವ ನವನಗರ ಪ್ರದೇಶದಲ್ಲಿ ಪೊಲೀಸ್ ಠಾಣೆ ಪ್ರಾರಂಭಿಸುವ ಬಗ್ಗೆ

4412 (3945) : ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ನಗರ ಮಧ್ಯದಲ್ಲಿರುವ ನವನಗರ ಪ್ರದೇಶದಲ್ಲಿ ಪೊಲೀಸ್ ಠಾಣೆ ಇಲ್ಲದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನವನಗರ ಪ್ರದೇಶದಲ್ಲಿ ಪೊಲೀಸ್ ಠಾಣೆ ಹೊಸದಾಗಿ ಪ್ರಾರಂಭಿಸಲು ನಾಗರೀಕರ ಹಿತದೃಷ್ಟಿಯಿಂದ ಅವಶ್ಯವಾಗಿರುತ್ತದೆ ಎಂಬುದನ್ನು ಪರಿಗಣಿಸಿ ಪೊಲೀಸ್ ಆಯುಕ್ತರು ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ;

ಇ) ಪೊಲೀಸ್ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಗೆ ಸರ್ಕಾರ ಮಂಜೂರಾತಿ ನೀಡಿದೆಯೇ.

ಈ) ನೀಡಿದ್ದಲ್ಲಿ ಯಾವ ಅವಧಿಯಲ್ಲಿ ಪೊಲೀಸ್ ಠಾಣೆ ಕಾರ್ಯ ಪ್ರಾರಂಭಿಸುತ್ತದೆ (ವಿವರ ಒದಗಿಸುವುದು)

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

ಅ) ಹೌದು.